# ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 40 (51)
ಸದಸ್ಯರ ಹೆಸರು : ಶ್ರೀ. ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು)
ಉತ್ತರಿಸಬೇಕಾದವರು : ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು
ಉತ್ತರಿಸಬೇಕಾದ ದಿನಾಂಕ : 27.01.2026

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಬಹುತೇಕ ರೈತರು ತೆಂಗು ಬೆಳೆಯ ಅವಲಂಬಿತರಾಗಿದ್ದು. ಕೇಂದ್ರವಲಯದ ತೆಂಗು ಅಭಿವೃದ್ಧಿ ಮಂಡಳಿಯನ್ನು ಕೇರಳದಿಂದ ಕರ್ನಾಟಕಕ್ಕೆ ಸ್ಥಳಾಂತರಿಸಲು ರಾಜ್ಯ ಸರ್ಕಾರ ಪ್ರಸ್ತಾವನೆ ಸಲ್ಲಿಸಿದೆಯೇ; ಇಲ್ಲದೇ ಇದ್ದಲ್ಲಿ. ಯಾವಾಗ ರಾಜ್ಯ ಸರ್ಕಾರ ಕೇಂದ್ರ ಸರ್ಕಾರಕ್ಕೆ ಇಂತಹ ಪ್ರಸ್ತಾವನೆ ಸಲ್ಲಿಸುವುದು; | ಕೇಂದ್ರ ಸರ್ಕಾರದ ಸಂಸ್ಥೆಯಿಂದ ತೆಂಗು ಅಭಿವೃದ್ಧಿ ಮಂಡಳಿಯನ್ನು ಕೇರಳದಿಂದ ಕರ್ನಾಟಕ ರಾಜ್ಯಕ್ಕೆ ಸ್ಥಳಾಂತರಿಸುವ ಪ್ರಸ್ತಾವನೆ ಸರ್ಕಾರದ ಪರಿಗಣನೆಯಲ್ಲಿರುವುದಿಲ್ಲ |
| ಆ) | ಕೇಂದ್ರ ವಲಯದ ತೆಂಗು ಅಭಿವೃದ್ಧಿ ಮಂಡಳಿ ಸಮಗ್ರ ಬೇಸಾಯದ ಅಡಿಯಲ್ಲಿ ನೀಡುತ್ತಿರುವ ಅನುದಾನ/ಸಹಾಯಧನ ಎಷ್ಟು; ಕಳೆದ ಹತ್ತು ವರ್ಷಗಳಲ್ಲಿ ರಾಜ್ಯದ ತೆಂಗು ಬೆಳಗಾರರಿಗೆ ಬಿಡುಗಡೆ ಮಾಡಿರುವ ಸಹಾಯಧನವೆಷ್ಟು; (ವರ್ಷವಾರು ವಿವರಗಳನ್ನು ಒದಗಿಸುವುದು) | ಕೇಂದ್ರ ವಲಯದ ತೆಂಗು ಅಭಿವೃದ್ಧಿ ಮಂಡಳಿ ಸಮಗ್ರ ಬೇಸಾಯದ ಅಡಿಯಲ್ಲಿ ನೀಡುತ್ತಿರುವ ಸಹಾಯಧನ ವಿವರ ಈ ಕೆಳಗಿನಂತಿದೆ.<br>1. ತೆಂಗಿನ ತೋಟಗಳ ಪುನ:ಶ್ಚೇತನ, ಮರುನಾಟಿ ಮತ್ತು ನಿರ್ವಹಣೆಯಿಂದ ತೆಂಗಿನ ಮರಗಳು ಸದೃಡಗೊಂಡು ರೋಗ/ ಕೀಟ ನಿರೋಧಕ ಶಕ್ತಿ ಬೆಳಸಿಕೊಳ್ಳುತ್ತವೆ ಅದುದರಿಂದ ಈ ಚಟುವಟಿಕೆಗಳಿಗಾಗಿ ಪ್ರತಿ ಫಲಾನುಭವಿಗೆ ಒಂದು ಹೆಕ್ಟೇರ್ ವರೆಗೆ ರೂ. 54,000/- ಗಳನ್ನು ಎರಡು ವರ್ಷದ ಅವಧಿಗೆ ಸಹಾಯಧನ ನೀಡಲಾಗುತ್ತಿದೆ. ಮೊದಲನೇ ವರ್ಷ ರೂ.45,250/- ಗಳನ್ನು ಹಾಗೂ ಎರಡನೇ ವರ್ಷದ ನಿರ್ವಹಣೆಗೆ ರೂ.8,750/ ಗಳ ಸಹಾಯಧನವನ್ನು ನೀಡಲಾಗುತ್ತಿದೆ.<br>ಮೊದಲನೇ ವರ್ಷದಲ್ಲಿ ರೋಗ/ಕೀಟ ಬಾಧಿತ, ಒಣಗಿದ ಮರ ತೆಗೆಯಲು, ಹೊಸ ತೆಂಗಿನ ಗಿಡ ನೆಡಲು, ನಿರ್ವಹಣೆಗಾಗಿ ಪೋಷಕಾಂಶಗಳು, ಬೇವಿನ ಹಿಂಡಿ, ಹಸಿರೆಲೆ ಗೊಬ್ಬರದ ಬೀಜಗಳು, ಸಸ್ಯಸಂರಕ್ಷಣ ಔಷಧಿಗಳನ್ನು ನೀಡಲು 4571 ರೈತರಿಗೆ 2423 ಹೆಕ್ಟೇರ್ ಪ್ರದೇಶಕ್ಕಾಗಿ ರೂ.951 ಲಕ್ಷಗಳ ಸಹಾಯಧನ ನೀಡಲಾಗಿದೆ. ತುಮಕೂರು ಜಿಲ್ಲೆಯಲ್ಲಿ 1084 ರೈತರಿಗೆ 591 ಹೆಕ್ಟೇರ್ ಪ್ರದೇಶದಲ್ಲಿ ರೂ. 187.17 ಲಕ್ಷಗಳ ಸಹಾಯಧನ ನೀಡಲಾಗಿದೆ. ಈ ಪ್ರದೇಶದ ಎರಡನೇ ವರ್ಷದ ನಿರ್ವಹಣೆಗಾಗಿ ರೂ.186.04 ಲಕ್ಷಗಳನ್ನು ವಿನಿಯೋಗಿಸಲಾಗಿದೆ.<br>2. ರೈತರ ತಾಕುಗಳಲ್ಲಿ ಪ್ರಾತ್ಯಕ್ಷತೆ ಹಾಗೂ ನಿರ್ವಹಣೆಗಾಗಿ ಒಂದು ಹೆಕ್ಟೇರ್ ಗೆ ರೂ. 35,000/- ಗಳಂತೆ 2 ವರ್ಷಗಳ ಅವಧಿಗೆ, ಮೊದಲನೇ ವರ್ಷ ರೂ.17500/- ಗಳು ಮತ್ತು ಎರಡನೇ ವರ್ಷದಲ್ಲಿ ರೂ.17500/- ಗಳಂತೆ ಸಹಾಯಧನ ನೀಡಲಾಗುತ್ತಿದೆ. ರೋಗ ಮತ್ತು ಕೀಟಬಾಧಿತ ತಾಕುಗಳನ್ನು ಗುಚ್ಛಗಳಲ್ಲಿ (Clusters) |

<table>
<tr><td></td><td></td><td>ಆಯ್ಕೆ ಮಾಡಿ ಸಹಾಯಧನ ನೀಡಲಾಗಿರುತ್ತದೆ. ಮೊದಲನೇ ವರ್ಷದ ಕಾರ್ಯಕ್ರಮದಡಿ 41185 ರೈತರಿಗೆ 28420 ಹೆಕ್ಟೇರ್ ಪ್ರದೇಶದಲ್ಲಿ ರೂ. 5000 ಲಕ್ಷಗಳ ಸಹಾಯಧನ ಒದಗಿಸಲಾಗಿದೆ. ತುಮಕೂರು ಜಿಲ್ಲೆಯಲ್ಲಿ 15338 ರೈತರಿಗೆ 9840 ಹೆಕ್ಟೇರ್ ಪ್ರದೇಶದಲ್ಲಿ ರೂ. 1829.87 ಲಕ್ಷಗಳ ಸಹಾಯಧನ ನೀಡಲಾಗಿದೆ. ಈ ಪ್ರದೇಶದ ಎರಡನೇ ವರ್ಷದ ನಿರ್ವಹಣೆಗಾಗಿ ರೂ.4973.45 ಲಕ್ಷಗಳ ಅನುದಾನ ವಿನಿಯೋಗಿಸಲಾಗಿದೆ. ತುಮಕೂರು ಜಿಲ್ಲೆಯಲ್ಲಿ 12312 ರೈತರಿಗೆ 8362 ಹೆಕ್ಟೇರ್ ಪ್ರದೇಶದಲ್ಲಿ ರೂ. 1385 ಲಕ್ಷಗಳ ಸಹಾಯಧನ ನೀಡಲಾಗಿದೆ.<br><br>ಕಳೆದ ಹತ್ತು ವರ್ಷಗಳಲ್ಲಿ ರಾಜ್ಯದ ತೆಂಗು ಬೆಳಗಾರರಿಗೆ ತೆಂಗು ಮಂಡಳಿಯಿಂದ ಬಿಡುಗಡೆ ಮಾಡಿರುವ ಸಹಾಯಧನದ ವರ್ಷವಾರು ವಿವರ ಕೆಳಗಿನಂತಿದೆ.
<table>
<tr><th>ವರ್ಷ</th><th>ಬಿಡುಗಡೆಯಾದ ಅನುದಾನ (ರೂ. ಲಕ್ಷಗಳಲ್ಲಿ)</th></tr>
<tr><td>2015-16</td><td>164.00</td></tr>
<tr><td>2016-17</td><td>1085.06</td></tr>
<tr><td>2017-18</td><td>1649.76</td></tr>
<tr><td>2018-19</td><td>1030.43</td></tr>
<tr><td>2019-20</td><td>1550.35</td></tr>
<tr><td>2020-21</td><td>2016.37</td></tr>
<tr><td>2021-22</td><td>1218.77</td></tr>
<tr><td>2022-23</td><td>1052.99</td></tr>
<tr><td>2023-24</td><td>7143.55</td></tr>
<tr><td>2024-25</td><td>1058.19</td></tr>
</table></td></tr>
<tr><td>ಇ)</td><td>ತೆಂಗು ಬೆಳೆಯ ಅಭಿವೃದ್ಧಿ ಯೋಜನೆಯಲ್ಲಿ ರಾಜ್ಯ ಸರ್ಕಾರ ನೀಡುತ್ತಿರುವ ಅನುದಾನ ಎಷ್ಟು; ಕಳೆದ 3 ವರ್ಷಗಳಲ್ಲಿ ನೀಡಿರುವ ಅನುದಾನಗಳ ತಾಲ್ಲೂಕುವಾರು ವಿವರಗಳನ್ನು ಒದಗಿಸುವುದು;</td><td>ತೆಂಗು ಬೆಳೆಯ ಅಭಿವೃದ್ಧಿ ಯೋಜನೆಯು ಕೇಂದ್ರ ವಲಯ ಯೋಜನೆಯಾಗಿದ್ದು, ಶೇ. 100 ರಷ್ಟು ಅನುದಾನ CDB (Coconut Development Board)ಯಿಂದ ನೀಡಲಾಗುತ್ತಿದೆ. 2022-23 ನೇ ಸಾಲಿನಲ್ಲಿ ತೆಂಗಿನಲ್ಲಿ ಅಂತರ ಬೆಳೆಯಾಗಿ ಕೋಕೋ/ಕಾಳುಮೆಣಸು ಪ್ರದೇಶ ವಿಸ್ತೀರ್ಣ ಹಾಗೂ ಸಮಗ್ರ ಕೀಟ ರೋಗಗಳ ನಿಯಂತ್ರಣ ಕಾರ್ಯಕ್ರಮಕ್ಕೆ ರಾಜ್ಯ ಸರ್ಕಾರದಿಂದ ರೂ.100.00 ಲಕ್ಷಗಳ ಅನುದಾನವನ್ನು ನೀಡಲಾಗಿದೆ. ತಾಲ್ಲೂಕುವಾರು ವಿವರ ಅನುಬಂದದಲ್ಲಿ ಒದಗಿಸಿದೆ.</td></tr>
<tr><td>ಈ)</td><td>ರಾಜ್ಯದಲ್ಲಿ ತೆಂಗು ಬೆಳೆಯ ವಿಸ್ತೀರ್ಣ ಎಷ್ಟು ಮತ್ತು ಇದನ್ನು ಉತ್ತೇಜಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು: ರೈತರಿಗೆ ಯಾವ ಯಾವ ಯೋಜನೆಗಳಲ್ಲಿ ತೆಂಗು ಬೆಳೆಗೆ ಅನುದಾನ ನೀಡಲಾಗುತ್ತಿದೆ;</td><td>ರಾಜ್ಯದಲ್ಲಿ ತೆಂಗು ಬೆಳೆಯ ವಿಸ್ತೀರ್ಣ 6.01 ಲಕ್ಷ ಹೆಕ್ಟೇರ್ ಗಳಾಗಿದೆ. ತೆಂಗು ಬೆಳಗಾರರನ್ನು ಉತ್ತೇಜಿಸಲು ವಿವಿದ ಯೋಜನೆಗಳಡಿ ಕೈಗೊಂಡ ಕ್ರಮಗಳು ಕೆಳಗಿನಂತಿದೆ.<br><br>1. ತೆಂಗಿನ ತೋಟಗಳ ಪುನ:ಶ್ಚೇತನ, ಮರುನಾಟಿ ಮತ್ತು ನಿರ್ವಹಣೆಯಿಂದ ತೆಂಗಿನ ಮರಗಳು ಸದೃಡಗೊಂಡು</td></tr>
</table>

| | | |
|---|---|---|
| | | ರೋಗ/ ಕೀಟ ನಿರೋಧಕ ಶಕ್ತಿ ಬೆಳೆಸಿಕೊಳ್ಳುತ್ತವೆ ಅದುದರಿಂದ ಈ ಚಟುವಟಿಕೆಗಳಿಗಾಗಿ ಪ್ರತಿ ಫಲಾನುಭವಿಗೆ ಒಂದು ಹೆಕ್ಟೇರ್ ವರೆಗೆ ರೂ. 54,000/- ಗಳನ್ನು ಎರಡು ವರ್ಷದ ಅವಧಿಗೆ ಸಹಾಯಧನ ನೀಡಲಾಗುತ್ತಿದೆ. ಮೊದಲನೇ ವರ್ಷ ರೂ.45,250/- ಗಳನ್ನು ಹಾಗೂ ಎರಡನೇ ವರ್ಷದ ನಿರ್ವಹಣೆಗೆ ರೂ.8,750/ ಗಳ ಸಹಾಯಧನವನ್ನು ನೀಡಲಾಗುತ್ತಿದೆ. ಮೊದಲನೇ ವರ್ಷದಲ್ಲಿ ರೋಗ/ಕೀಟ ಬಾಧಿತ, ಒಣಗಿದ ಮರ ತೆಗೆಯಲು, ಹೊಸ ತೆಂಗಿನ ಗಿಡ ನೆಡಲು, ನಿರ್ವಹಣೆಗಾಗಿ ಪೋಷಕಾಂಶಗಳು, ಬೇವಿನ ಹಿಂಡಿ, ಹಸಿರೆಲೆ ಗೊಬ್ಬರದ ಬೀಜಗಳು, ಸಸ್ಯಸಂರಕ್ಷಣ ಔಷಧಿಗಳನ್ನು ನೀಡಲು 4571 ರೈತರಿಗೆ 2423 ಹೆಕ್ಟೇರ್ ಪ್ರದೇಶಕ್ಕಾಗಿ ರೂ.951 ಲಕ್ಷಗಳ ಸಹಾಯಧನ ನೀಡಲಾಗಿದೆ. ತುಮಕೂರು ಜಿಲ್ಲೆಯಲ್ಲಿ 1084 ರೈತರಿಗೆ 591 ಹೆಕ್ಟೇರ್ ಪ್ರದೇಶದಲ್ಲಿ ರೂ. 187.17 ಲಕ್ಷಗಳ ಸಹಾಯಧನ ನೀಡಲಾಗಿದೆ. ಈ ಪ್ರದೇಶದ ಎರಡನೇ ವರ್ಷದ ನಿರ್ವಹಣೆಗಾಗಿ ರೂ.186.04 ಲಕ್ಷಗಳನ್ನು ವಿನಿಯೋಗಿಸಲಾಗಿದೆ.<br><br>2. ರೈತರ ತಾಕುಗಳಲ್ಲಿ ಪ್ರಾತ್ಯಕ್ಷತೆ ಹಾಗೂ ನಿರ್ವಹಣೆಗಾಗಿ ಒಂದು ಹೆಕ್ಟೇರ್ ಗೆ ರೂ. 35,000/- ಗಳಂತೆ 2 ವರ್ಷಗಳ ಅವಧಿಗೆ, ಮೊದಲನೇ ವರ್ಷ ರೂ.17500/- ಗಳು ಮತ್ತು ಎರಡನೇ ವರ್ಷದಲ್ಲಿ ರೂ.17500/- ಗಳಂತೆ ಸಹಾಯಧನ ನೀಡಲಾಗುತ್ತಿದೆ. ರೋಗ ಮತ್ತು ಕೀಟಬಾಧಿತ ತಾಕುಗಳನ್ನು ಗುಚ್ಛಗಳಲ್ಲಿ (Clusters) ಆಯ್ಕೆ ಮಾಡಿ ಸಹಾಯಧನ ನೀಡಲಾಗಿರುತ್ತದೆ. ಮೊದಲನೇ ವರ್ಷದ ಕಾರ್ಯಕ್ರಮದಡಿ 41185 ರೈತರಿಗೆ 28420 ಹೆಕ್ಟೇರ್ ಪ್ರದೇಶದಲ್ಲಿ ರೂ. 5000 ಲಕ್ಷಗಳ ಸಹಾಯಧನ ಒದಗಿಸಲಾಗಿದೆ. ತುಮಕೂರು ಜಿಲ್ಲೆಯಲ್ಲಿ 15338 ರೈತರಿಗೆ 9840 ಹೆಕ್ಟೇರ್ ಪ್ರದೇಶದಲ್ಲಿ ರೂ. 1829.87 ಲಕ್ಷಗಳ ಸಹಾಯಧನ ನೀಡಲಾಗಿದೆ. ಈ ಪ್ರದೇಶದ ಎರಡನೇ ವರ್ಷದ ನಿರ್ವಹಣೆಗಾಗಿ ರೂ.4973.45 ಲಕ್ಷಗಳ ಅನುದಾನ ವಿನಿಯೋಗಿಸಲಾಗಿದೆ. ತುಮಕೂರು ಜಿಲ್ಲೆಯಲ್ಲಿ 12312 ರೈತರಿಗೆ 8362 ಹೆಕ್ಟೇರ್ ಪ್ರದೇಶದಲ್ಲಿ ರೂ. 1385 ಲಕ್ಷಗಳ ಸಹಾಯಧನ ನೀಡಲಾಗಿದೆ.<br><br>3. ತೆಂಗು ಬೆಳೆಯಲ್ಲಿ ಕಂಡು ಬರುವ ಕಪ್ಪುತಲೆಹುಳು ಹಾಗೂ ಬಿಳಿನೊಣ ಕೀಟಗಳ ನಿಯಂತ್ರಣಕ್ಕಾಗಿ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ 23 ಪ್ರಯೋಗ ಶಾಲೆಗಳಲ್ಲಿ ಗೋನಿಯೋಜಸ್ ಎಂಬ ಪರೋಪಜೀವಿಗಳು ಹಾಗೂ ಐಸಿರಿಯಾ ಜೈವಿಕ ಕೀಟನಾಶಕವನ್ನು ಉತ್ಪಾದನೆ ಮಾಡಿ ಉಚಿತವಾಗಿ ವಿತರಿಸಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ಒಟ್ಟು ರೂ. 140.00 ಲಕ್ಷಗಳ ಅನುದಾನ ನಿಗದಿಯಾಗಿದ್ದು, ತುಮಕೂರು ಜಿಲ್ಲೆಗೆ 21.00 ಲಕ್ಷಗಳನ್ನು ನೀಡಲಾಗಿದೆ. |

4. ತೆಂಗು ಸೇರಿದಂತೆ ವಿವಿಧ ತೋಟಗಾರಿಕಾ ಬೆಳೆಗಳಿಗೆ ಸಸ್ಯ ಸಂರಕ್ಷಣಾ ಔಷಧಿಗಳಿಗೆ ತೋಟಗಾರಿಕೆ ಬೆಳೆಗಳ ಕೀಟ ಮತ್ತು ರೋಗಗಳ ಸಮಗ್ರ ನಿಯಂತ್ರಣ ಯೋಜನೆಯಡಿ ಪ್ರತಿ ಹೆಕ್ಟೇರಿಗೆ ತಗಲುವ ರೂ. 10000/- ಗಳಲ್ಲಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ರೈತರಿಗೆ ಶೇ.90ರಂತೆ ರೂ.9000/- ಗಳ ಸಹಾಯಧನ ಹಾಗೂ ಸಾಮಾನ್ಯ ವರ್ಗದ ರೈತರಿಗೆ ಶೇ.75ರಂತೆ ರೂ.7500ಗಳ ಸಹಾಯಧನ ನೀಡಲಾಗುತ್ತಿದೆ.

5. ತೆಂಗು ಬೆಳೆ ಸೇರಿದಂತೆ ತೋಟಗಾರಿಕೆ ಬೆಳೆಗಳ ಸಮಗ್ರ ರೋಗ/ಕೀಟಗಳ ಹಾಗೂ ಪೋಷಕಾಂಶಗಳ ನಿರ್ವಹಣೆಗಾಗಿ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ರೂ.5000/- ಗಳಲ್ಲಿ ಪ್ರತಿ ಹೆಕ್ಟೇರ್ ಗೆ ತಗಲುವ ವೆಚ್ಚದ ಶೇ.30ರಂತೆ ಪ್ರತಿ ಹೆಕ್ಟೇರಿಗೆ ರೂ.1500 ದರದಲ್ಲಿ 2ಹೆಕ್ಟೇರ್ ರವರೆಗೆ ರೂ.3000/-ಗಳ ಸಹಾಯಧನ ನೀಡಲಾಗುತ್ತಿದೆ.

6. ರಾಷ್ಟ್ರೀಯ ಕೃಷಿ ವಿಕಾಸ್ ಯೋಜನೆಯಡಿಯಲ್ಲಿ ತೆಂಗು ಶೇಖರಣ ಘಟಕಗಳನ್ನು ನಿರ್ಮಿಸಲು ಪ್ರತಿ ಘಟಕದ ವೆಚ್ಚ ರೂ.87500 /- ರಂತೆ ಸಹಾಯಧನ ನೀಡಲಾಗುತ್ತಿದೆ. 2025-26 ನೇ ಸಾಲಿನಲ್ಲಿ 245 ಘಟಕಗಳ ಭೌತಿಕ ಗುರಿ ಮತ್ತು ರೂ.2.14 ಕೋಟಿಗಳ ಆರ್ಥಿಕ ಗುರಿ ನಿಗಧಿಪಡಿಸಿದ್ದು, ಕಾರ್ಯಕ್ರಮ ಪ್ರಗತಿಯಲ್ಲಿರುತ್ತದೆ.

7. ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ-ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ–ಪ್ರತಿ ಹನಿಗೆ ಅಧಿಕ ಬೆಳೆ ಕಾರ್ಯಕ್ರಮದಡಿ ತೆಂಗು ಬೆಳೆಯಲ್ಲಿ ಹನಿ ನೀರಾವರಿ ಪದ್ಧತಿ ಘಟಕ ಅಳವಡಿಕೊಳ್ಳಲು ಎಲ್ಲಾ ವರ್ಗದ ರೈತರಿಗೆ 2 ಹೆಕ್ಟೇರ್ ವರೆಗೆ ಶೇ. 90 ರಷ್ಟು ಸಹಾಯಧನ ನೀಡಲಾಗುತ್ತಿದೆ ಹಾಗೂ 2 ರಿಂದ 5 ಹೆಕ್ಟೇರ್ ವರೆಗೆ ಶೇ.45 ರಷ್ಟು ಸಹಾಯಧನ ನೀಡಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ಸದರಿ ಕಾರ್ಯಕ್ರಮಕ್ಕೆ ರೂ. 545.66 ಕೋಟಿಗಳ ಅನುದಾನ ನಿಗದಿಯಾಗಿರುತ್ತದೆ.

8. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ (MGNREGA) ಅಡಿಯಲ್ಲಿ ತೆಂಗು ತೋಟಗಳನ್ನು ನಿರ್ಮಾಣ ಮಾಡಲು ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಫಲಾನುಭವಿಗಳಿಗೆ ಕೂಲಿ ಹಾಗೂ ಸಾಮಗ್ರಿ ವೆಚ್ಚ ಸೇರಿ ಪ್ರತಿ ಹೆಕ್ಟೇರ್ ಗೆ ರೂ. 61481 ಸಾವಿರಗಳ ವರೆಗೆ ನೆರವು ನೀಡಲಾಗುತ್ತಿದೆ.

| | | |
|---|---|---|
| | | 9. ದಿನಾಂಕ: 31.07.2025 ಹಾಗೂ 01.08.2025 ರಂದು ತಜ್ಞರು, Central Plantation Crops Research Institute (CPCRI) ಕಾಸರಗೋಡು, ತೋಟಗಾರಿಕೆ ವಿಶ್ವ ವಿದ್ಯಾನಿಲಯ ತಜ್ಞರು, CDB ಅಧಿಕಾರಿಗಳು ಹಾಗೂ ಇಲಾಖಾ ಅಧಿಕಾರಿಗಳಿಂದ ತೆಂಗು ಬೆಳೆಯಲ್ಲಿ ಕಂಡು ಬರುವ ರೋಗ / ಕೀಟಗಳಿಗೆ ಹಾನಿಗೊಳಗಾದ ತುಮಕೂರು ಹಾಗೂ ಹಾಸನ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು ರೈತರ ತಾಕುಗಳಲ್ಲಿ 12 ಪ್ರಾತ್ಯಕ್ಷತೆ / 85 ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು 12500 ರೈತರಿಗೆ ಅರಿವು ಮೂಡಿಸಲಾಗುತ್ತಿದೆ.<br>10. ಕೇಂದ್ರ ಸರ್ಕಾರದ ವತಿಯಿಂದ ರಚಿಸಿರುವ ವೈಜ್ಞಾನಿಕ ಸಮಿತಿಯನ್ನು ರಚಿಸಲಾಗಿದ್ದು, ದಿನಾಂಕ:11.11.2025 ರಂದು ನಿರ್ದೇಶಕರು, CPCRI, ಕಾಸರಗೋಡು ಇವರ ಅಧ್ಯಕ್ಷತೆಯಲ್ಲಿ ನಿರ್ದೇಶಕರು, ತೋಟಗಾರಿಕೆ ಇಲಾಖೆ ರವರ ಉಪಸ್ಥಿತಿಯಲ್ಲಿ ನಡೆದ ಸಭೆಯಲ್ಲಿ ಇಲಾಖಾ ಅನುಷ್ಠಾನಾಧಿಕಾರಿಗಳೊಂದಿಗೆ ಚರ್ಚಿಸಿ ಕೇಂದ್ರ ಸರ್ಕಾರಕ್ಕೆ ಕಪ್ಪುತಲೆ ಹುಳುವಿನ ನಿಯಂತ್ರಣಕ್ಕೆ ತಾಕುಗಳ ನೈರ್ಮಲ್ಯಗೊಳಿಸುವುದು, ಬಾಧಿತ ಮರದ ಎಲೆ, ಕಾಂಡ ಕತ್ತರಿಸಿ ನಾಶಪಡಿಸುವುದು, ಪರೋಪ ಜೀವಿಗಳ ಉತ್ಪಾದನೆ ಮಾಡಿ ವಿತರಿಸುವುದು, ಪರೋಪ ಜೀವಿಗಳ ಉತ್ಪಾದನೆಗೆ ಪ್ರಯೋಗಶಾಲೆಗಳ ನಿರ್ಮಾಣ ಹಾಗೂ ಉನ್ನತಿಕರಣಗೊಳಿಸುವುದು. ಬಿಳಿನೊಣ ಬಾಧೆಯ ನಿಯಂತ್ರಣಕ್ಕೆ ಬೇವಿನ ಎಣ್ಣೆ, ಐಸೇರಿಯಾ ಜೈವಿಕ ಶಿಲೀಂದ್ರ ಕೀಟನಾಶಕ/ಸಿಂಪ್ಲಿಸಿಲಿಯಂ ಯನ್ನು ಸಿಂಪಡಿಸುವುದು, ಸಮಗ್ರ ಕೀಟ ಮತ್ತು ರೋಗಗಳ ನಿರ್ವಹಣೆಗಾಗಿ ಬೇವಿನಹಿಂಡಿ, ಜೈವಿಕ ಗೊಬ್ಬರಗಳು, ಟ್ರೈಕೊಡರ್ಮಾ, ಮಣ್ಣು ಸುಧಾರಕಗಳು ಹಾಗೂ ಪೊಟ್ಯಾಶ್ ಗೊಬ್ಬರವನ್ನು ನೀಡಲು, ಈ ಕೀಟಗಳ ನಿಯಂತ್ರಣಕ್ಕೆ CPCRI (ಕೇಂದ್ರ ತೋಟದ ಬೆಳೆಗಳ ಸಂಶೋಧನಾ ಕೇಂದ್ರ), ಕಾಸರಗೋಡು ಹಾಗೂ NBAIR (ರಾಷ್ಟ್ರೀಯ ಕೃಷಿ ಕೀಟ ಸಂಪನ್ಮೂಲಗಳ ಬ್ಯೂರೋ), ಬೆಂಗಳೂರು ಗಳಲ್ಲಿ ಸಂಶೋಧನೆಯನ್ನು ಕೈಗೊಳ್ಳುವುದು, ಸೇರಿದಂತೆ ಸಮಗ್ರ ಕೀಟ/ಪೋಷಕಾಂಶಗಳ ನಿರ್ವಹಣೆಗೆ ತುಮಕೂರು ಜಿಲ್ಲೆ ಸೇರಿದಂತೆ ಪ್ರಮುಖ ತೆಂಗು ಬೆಳೆಯುವ ಜಿಲ್ಲೆಗಳಿಗೆ ರೂ. 791.05 ಕೋಟಿಗಳ ಪ್ರಸ್ತಾವನೆಯನ್ನು ಅನುಮೋದನೆಗಾಗಿ CPCRI, ಕಾಸರಗೋಡು ರವರ ಮೂಲಕ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿರುತ್ತದೆ. |

| | | |
|---|---|---|
| ಉ) | ತೆಂಗು ಬೆಳೆ ಮತ್ತು ತೆಂಗಿನ ಮರದ ಮೂಲಕ ದೊರೆಯುವ ಉತ್ಪನ್ನಗಳ ಮಾರುಕಟ್ಟೆಗೆ ರಾಜ್ಯ ಸರ್ಕಾರ ಯಾವ ಯಾವ ಯೋಜನೆಗಳನ್ನು ಕೈಗೊಂಡಿರುತ್ತದೆ; ತೆಂಗು ಅಭಿವೃದ್ದಿ ಮಂಡಳಿಗೆ ಕಳೆದ 10 ವರ್ಷಗಳಲ್ಲಿ ನೀಡಿರುವ ಅನುದಾನ ಎಷ್ಟು? (ವರ್ಷವಾರು ವಿವರಗಳನ್ನು ಒದಗಿಸುವುದು) | ತೆಂಗಿನ ಉತ್ಪನ್ನಗಳ ಮಾರುಕಟ್ಟೆಗೆ ತೋಟಗಾರಿಕೆ ಇಲಾಖೆಯಲ್ಲಿ ಕಾರ್ಯಕ್ರಮಗಳು ಇರುವುದಿಲ್ಲ. ತೆಂಗು ಅಭಿವೃದ್ದಿ ಮಂಡಳಿಯು ಕೇಂದ್ರ ಸರ್ಕಾರದ ಸಂಸ್ಥೆಯಾಗಿರುವುದರಿಂದ ನೇರವಾಗಿ ಅನುದಾನ ಬಿಡುಗಡೆಯಾಗುತ್ತಿದೆ.. ಅದ್ದರಿಂದ ರಾಜ್ಯ ಸರ್ಕಾರದಿಂದ ಅನುದಾನ ಬಿಡುಗಡೆಯಾಗಿರುವುದಿಲ್ಲ. |

HORTI 35 HGM 2026

(ಎಸ್.ಎಸ್.ಮಲ್ಲಿಕಾರ್ಜುನ್)
ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರು

ಅನುಬಂಧ

| ಜಿಲ್ಲೆ | ತಾಲ್ಲೂಕು | ಬಿಡುಗಡೆಯಾದ ಅನುದಾನ (ರೂ. ಲಕ್ಷಗಳಲ್ಲಿ) |
|---|---|---|
| ಚಿತ್ರದುರ್ಗ | ಚಿತ್ರದುರ್ಗ | 2.63 |
| | ಹಿರಿಯೂರು | 4.11 |
| | ಹೊಳಲ್ಕೆರೆ | 4.46 |
| | ಹೊಸದುರ್ಗ | 6.91 |
| ದಾವಣಗೆರೆ | ದಾವಣಗೆರೆ | 2.36 |
| | ಚನ್ನಗಿರಿ | 1.84 |
| | ಹೊನ್ನಳ್ಳಿ | 2.28 |
| | ಹರಿಹರ | 2.36 |
| | ಜಗಳೂರು | 2.28 |
| ಹಾಸನ | ಅರಕಲಗೂಡು | 0.88 |
| | ಅರಸಿಕೆರೆ | 16.00 |
| | ಬೇಲೂರು | 4.11 |
| | ಚನ್ನರಾಯಪಟ್ಟಣ | 12.51 |
| ಮಂಡ್ಯ | ಕೆ.ಆರ್. ಪೇಟೆ | 3.33 |
| | ಮದ್ದೂರು | 3.24 |
| | ಮಳವಳ್ಳಿ | 3.50 |
| | ಮಂಡ್ಯ | 0.53 |
| | ನಾಗಮಂಗಲ | 0.61 |
| | ಪಾಂಡವಪುರ | 1.14 |
| | ಶ್ರೀರಂಗಪಟ್ಟಣ | 1.66 |
| ಶಿವಮೊಗ್ಗ | ಶಿವಮೊಗ್ಗ | 2.19 |
| | ಭದ್ರಾವತಿ | 2.19 |
| | ಶಿಕಾರಿಪುರ | 1.14 |
| | ಸೊರಬ | 1.58 |
| | ಸಾಗರ | 0.35 |
| ತುಮಕೂರು | ತುಮಕೂರು | 2.71 |
| | ಗುಬ್ಬಿ | 6.79 |
| | ಕುಣಿಗಲ್ | 4.38 |
| | ತಿಪಟೂರ್ | 7.79 |
| | ಚಿಕ್ಕನಾಯಕನಹಳ್ಳಿ | 8.75 |
| | ಶಿರಾ | 2.63 |
| | ತುರುವೆಕೆರೆ | 8.40 |
| | ಕೊರಟಗೆರೆ | 2.19 |

| | | |
|---|---|---|
| | ಮಧುಗಿರಿ | 1.31 |
| ಉತ್ತರ ಕನ್ನಡ | ಜೋಯಿಡಾ | 0.61 |
| | ಕುಮಟಾ | 0.39 |
| | ಹೊನ್ನಾವರ | 0.39 |
| | ಭಟ್ಕಳ | 0.35 |
| ದಕ್ಷಿಣ ಕನ್ನಡ | ಮಂಗಳೂರು | 0.88 |
| | ಭಂಟ್ವಾಳ | 0.88 |
| | ಪುತ್ತೂರು | 0.88 |
| | ಸುಳ್ಯ | 0.88 |
| | ಭೆಳ್ತಂಗಡಿ | 0.88 |
| ಮೈಸೂರು | ಹೆಚ್.ಡಿ.ಕೋಟೆ | 3.02 |
| | ಹುಣಸೂರು | 1.58 |
| | ಕೆ.ಆರ್.ನಗರ | 1.09 |
| | ಮೈಸೂರು | 0.61 |
| | ನಂಜನಗೂಡು | 1.31 |
| | ಪಿರಿಯಾಪಟ್ಟಣ | 0.88 |
| | ಟೀ. ನರಸೀಪುರ | 1.75 |
| ಉಡುಪಿ | ಉಡುಪಿ | 0.88 |
| | ಕುಂದಾಪುರ | 1.31 |
| | ಕಾರ್ಕಳ | 1.31 |
| ಚಿಕ್ಕಮಗಳೂರು | ಚಿಕ್ಕಮಗಳೂರು | 7.88 |
| | ಕಡೂರು | 20.39 |
| | ತರೀಕೆರೆ | 4.60 |
| ಚಾಮರಾಜನಗರ | ಚಾಮರಾಜನಗರ | 0.96 |
| | ಗುಂಡ್ಲುಪೇಟೆ | 1.05 |
| | ಕೊಳ್ಳೇಗಾಲ | 0.00 |
| | ಯಳಂದೂರು | 0.00 |
| ರಾಮನಗರ | ರಾಮನಗರ | 3.07 |
| | ಚನ್ನಪಟ್ಟಣ | 4.98 |
| | ಮಾಗಡಿ | 3.86 |
| | ಕನಕಪುರ | 2.00 |